## ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ 956 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:22.11.2019

## ಸುತ್ತೋಲೆ

ವಿಷಯ: 'ಸಂವಿಧಾನ ದಿವಸ' ಆಚರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಟಿಪ್ಪಣಿ ಸಂ. ಸಿಆಸುಇ 39 ಈಕಾಅ 2019, ದಿನಾಂಕ 06.11.2019.

******

ಭಾರತದ ಸಂವಿಧಾನವನ್ನು ಅಂಗೀಕರಿಸಿದ ನೆನಪಿಗಾಗಿ ಮತ್ತು ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಹಾಗೂ ಇತರ ಸಂಸ್ಥಾಪಕ ಪಿತಾಮಹರ ಅಮೂಲ್ಯ ಕೊಡುಗೆಗೆ ಗೌರವ ಸಲ್ಲಿಸಲು ಪ್ರತಿ ವರ್ಷ ನವೆಂಬರ್ 26 ರಂದು 'ಸಂವಿಧಾನ ದಿನ' ವನ್ನು ಆಚರಿಸಲಾಗುತ್ತಿದೆ. ಈ ವರ್ಷ ದೇಶವು ಸಂವಿಧಾನವನ್ನು ಅಂಗೀಕರಿಸಿ 70ನೇ ವರ್ಷಾಚರಣೆಯನ್ನು ಆಚರಿಸಲಾಗುತ್ತಿದೆ.

ಭಾರತೀಯ ಪ್ರಜಾಪ್ರಭುತ್ವದಲ್ಲಿ ಈ ಮಹತ್ವದ ಘಟನೆಯನ್ನು ಸ್ಮರಿಸಲು, ಸಂವಿಧಾನದ ಒಂದು ಪ್ರಮುಖ ಅಂಶವಾದ ಮೂಲಭೂತ ಕರ್ತವ್ಯಗಳ ಬಗ್ಗೆ ಜಾಗೃತಿ ಮೂಡಿಸುವ ದೃಷ್ಟಿಯಲ್ಲಿ ರಾಷ್ಟ್ರೀಯ ಅಭಿಯಾನವೊಂದನ್ನು ಹಮ್ಮಿಕೊಳ್ಳಲು ಕೇಂದ್ರ ಸರ್ಕಾರವು ಪ್ರಸ್ತಾಪಿಸಿದೆ. ಈ ಅಭಿಯಾನವು 26, ನವೆಂಬರ್ 2019 ರಿಂದ ಪ್ರಾರಂಭವಾಗುತ್ತಿದ್ದು, ಡಾ: ಬಾಬಾ ಸಾಹೇಬ್ ಅಂಬೇಡ್ಕರ್ ರವರ ಜನ್ಮ ವಾರ್ಷಿಕೋತ್ಸವವಾದ ದಿನಾಂಕ: 14.04.2020 ರಂದು ಮುಕ್ತಾಯವಾಗಲಿದೆ.

ಈ ಹಿನ್ನೆಲೆಯಲ್ಲಿ ದಿನಾಂಕ 26.11.2019 ರಿಂದ 14.04.2020 ರವರೆಗೆ ಜಿಲ್ಲಾ/ತಾಲ್ಲೂಕು /ಗ್ರಾಮ ಪಂಚಾಯತಿ ವತಿಯಿಂದ ಕೈಗೊಳ್ಳಬಹುದಾದ ಕಾರ್ಯಕ್ರಮಗಳ ಪಟ್ಟಿ (suggested activities) ಈ ಕೆಳಕಂಡಂತಿವೆ. ಇದಲ್ಲದೆ ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯತಿಗಳಿಗೆ ಸಂಬಂಧಿಸಿದ ಕೇಂದ್ರ ಸರ್ಕಾರದ ಇಲಾಖೆಯ ವತಿಯಿಂದಲೂ ಕೆಲವು ಮಾರ್ಗಸೂಚಿಗಳು ಬರಬಹುದಾಗಿದೆ. ಅದನ್ನು ಗಮನದಲ್ಲಿಟ್ಟುಕೊಂಡು 4½ ತಿಂಗಳ ಅವಧಿಗೆ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಕಾರ್ಯಕ್ರಮಗಳ ಕ್ಯಾಲೆಂಡರ್‌ವೊಂದನ್ನು ತಯಾರಿಸುವುದು. ಹೀಗೆ ತಯಾರಿಸಿದ calendar of events ನ ಒಂದು ಪ್ರತಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮುಖಾಂತರ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ)ಗೆ ಒದಗಿಸುವುದು ಹಾಗೂ ಪ್ರತಿ ತಿಂಗಳು ಆಗುವ ಬೆಳವಣಿಗೆಗಳ ಬಗ್ಗೆ ಮಾಹಿತಿ ನೀಡುವುದು.

CS Scanned with CamScanner

| ಹಮ್ಮಿಕೊಳ್ಳಬೇಕಾದ ಕಾರ್ಯಚಟುವಟಿಕೆಗಳು |
| --- |
| • ವಿಶೇಷ ಗ್ರಾಮ ಸಭೆ/ವಿಶೇಷ ಗ್ರಾಮ ಪಂಚಾಯತಿ ಸಭೆಯನ್ನು ಏರ್ಪಡಿಸಿ ಅಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಿಂದ ಪ್ರತಿಜ್ಞಾ ವಿಧಿ ಬೋಧಿಸುವುದು.<br>• ಗ್ರಾಮ ಪಂಚಾಯತಿ ಸಭೆಯಲ್ಲಿ ಕರ್ನಾಟಕ ಸರ್ಕಾರ ಮತ್ತು ಭಾರತ ಸರ್ಕಾರದ ಹಲವಾರು ಪ್ರಮುಖ ಯೋಜನೆಗಳ ಉದ್ದೇಶ, ಉಪಯುಕ್ತತೆಗಳ ವರದಿಯನ್ನು ಮಂಡಿಸುವುದು. |

ದಿನಾಂಕ 26.11.2019 ರಂದು ಪ್ರತಿಜ್ಞಾ ವಿಧಿಯನ್ನು ಜಿಲ್ಲಾ/ತಾಲ್ಲೂಕು/ಗ್ರಾಮ ಪಂಚಾಯತಿಗೆ ಸಂಬಂಧಿಸಿದಂತೆ ಬೋಧಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡು ಈ ಅಭಿಯಾನವನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳುವುದು. ಕೇಂದ್ರ ಸರ್ಕಾರದ ಡಿಪಾರ್ಟ್‌ಮೆಂಟ್ ಆಫ್ ಜಸ್ಟೀಸ್‌ನ ವೆಬ್‌ಸೈಟ್‌ನಲ್ಲಿ (https://doj.gov.in) ದಿನಾಂಕ: 26.11.2019 ರಂದು ಕೈಗೊಳ್ಳಬೇಕಾದ ಪ್ರತಿಜ್ಞಾ ವಿಧಿಯ ನಮೂನೆಯನ್ನು ಪಡೆದುಕೊಳ್ಳುವುದು.

ಮೇಲೆ ತಿಳಿಸಿರುವ ವೆಬ್‌ಸೈಟ್‌ನಲ್ಲಿ ಈ ಅಭಿಯಾನಕ್ಕೆ ಸಂಬಂಧಪಟ್ಟಂತೆ ಬಿತ್ತಪತ್ರಗಳು, ಚಲನಚಿತ್ರಗಳನ್ನು ಹಾಗೂ ಜಿಲ್ಲಾವಾರು ಸಂಪನ್ಮೂಲ ವ್ಯಕ್ತಿಗಳ ಪಟ್ಟಿಯನ್ನು ಹಾಕಲಾಗುತ್ತಿದ್ದು, ಅದರ ಉಪಯೋಗ/ಸೇವೆಯನ್ನು ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಉಪಯೋಗಿಸಿಕೊಳ್ಳುವುದು.

ಮೇಲ್ಕಂಡಂತೆ ಕ್ರಮ ಕೈಗೊಳ್ಳುವಂತೆ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದೆ.

(ಎಸ್.ಎ. ಅಶ್ರಫ್ಫುಲ್ ಹಸನ್)
ನಿರ್ದೇಶಕರು (ಪಂ.ರಾಜ್) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ/ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5. ಶಾರಕ/ಹೆಪ್ರ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ಇವರ ಮಾಹಿತಿಗಾಗಿ
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ, ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

Scanned with CamScanner

# ಭಾರತದ ಸಂವಿಧಾನ

## ಪ್ರಸ್ತಾವನೆ

ಭಾರತದ ಜನಗಳಾದ ನಾವು ಭಾರತವನ್ನು ಒಂದು [ಸಾರ್ವಭೌಮ ಸಮಾಜವಾದೀ ಸರ್ವಧರ್ಮ ಸಮಭಾವದ ಪ್ರಜಾಸತ್ತಾತ್ಮಕ ಗಣರಾಜ್ಯವಾಗಿ] ರಚಿಸಲು ಮತ್ತು ಅದರ ಸಮಸ್ತ ನಾಗರಿಕರಿಗೆ:

ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ ;

ವಿಚಾರ, ಅಭಿವ್ಯಕ್ತಿ, ವಿಶ್ವಾಸ, ಧರ್ಮಶ್ರದ್ಧೆ ಮತ್ತು ಉಪಾಸನಾ ಸ್ವಾತಂತ್ರ್ಯ ;

ಸ್ಥಾನಮಾನ ಹಾಗೂ ಅವಕಾಶ ಸಮಾನತೆ

ದೊರೆಯುವಂತೆ ಮಾಡಲು ಮತ್ತು ವ್ಯಕ್ತಿ ಗೌರವವನ್ನು, [ರಾಷ್ಟ್ರದ ಏಕತೆಯನ್ನು ಹಾಗೂ ಅಖಂಡತೆಯನ್ನು] ಸುನಿಶ್ಚಿತಗೊಳಿಸಿ ಅವರಲ್ಲಿ ಭ್ರಾತೃಭಾವನೆಯನ್ನು ವೃದ್ಧಿಗೊಳಿಸಲು ಶ್ರದ್ಧಾಪೂರ್ವಕ ಸಂಕಲ್ಪ ಮಾಡಿದವರಾಗಿ;

ನಮ್ಮ ಸಂವಿಧಾನ ಸಭೆಯಲ್ಲಿ 1949ನೆಯ ಇಸವಿ ನವೆಂಬರ್ ತಿಂಗಳ ಇಪ್ಪತ್ತಾರನೆಯ ತಾರೀಖಾದ ಈ ದಿವಸ ಈ ಮೂಲಕ ಈ ಸಂವಿಧಾನವನ್ನು ಅಂಗೀಕರಿಸಿ, ಅಧಿನಿಯಮಿಸಿ ಅರ್ಪಿಸಿಕೊಂಡಿದ್ದೇವೆ.

---

1. 1976ನೇ ಇಸವಿಯ ಭಾರತ ಸಂವಿಧಾನ (ನಲವತ್ತೆರಡನೆಯ ತಿದ್ದುಪಡಿ) ಅಧಿನಿಯಮದ 2ನೇ ಪ್ರಕರಣದ ಮೇರೆಗೆ "ಸಂಪೂರ್ಣ ಪ್ರಭುತ್ವ ಸಂಪನ್ನ ಲೋಕತಂತ್ರಾತ್ಮಕ ಗಣರಾಜ್ಯವಾಗಿ" ಎಂಬ ಪದಗಳ ಬದಲಾಗಿ (3-1-1977ರಿಂದ ಜಾರಿಗೆ ಬರುವಂತೆ ಪ್ರತ್ಯಾಯೋಜಿಸಲಾಗಿದೆ.
2. ಮೇಲ್ಕಂಡ ಅಧಿನಿಯಮದ 2ನೇ ಪ್ರಕರಣದ ಮೇರೆಗೆ "ರಾಷ್ಟ್ರದ ಏಕತೆಯನ್ನೂ" ಎಂಬ ಪದಗಳ ಬದಲಾಗಿ (3-1-1977ರಿಂದ ಜಾರಿಗೆ ಬರುವಂತೆ) ಪ್ರತ್ಯಾಯೋಜಿಸಲಾಗಿದೆ.

Scanned with CamScanner